## ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** 750 ಅಮೃತ ರೈತ/ಮೀನುಗಾರರ/ನೇಕಾರರ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನ ಕುರಿತು.

**ಓದಲಾಗಿದೆ:** 1. ಸನ್ಮಾನ್ಯ ಮುಖ್ಯ ಮಂತ್ರಿಯವರು 75ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಮಾಡಿದ ಘೋಷಣೆ.

2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ:ಮುಕಾ/736/2021, ದಿನಾಂಕ:16-08-2021.

ಸರ್ಕಾರ ಮೀನುಗಾರಿಕೆ ... OCT 2021

*****

**ಪ್ರಸ್ತಾವನೆ:**

3263652

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ, ದಿನಾಂಕ 15ನೇ ಆಗಸ್ಟ್ 2021 ರ ಸ್ವಾತಂತ್ರ್ಯ ದಿನಾಚರಣೆಯಂದು ಮಾಡಲಾದ ಭಾಷಣದಲ್ಲಿ ರೈತ /ಮೀನುಗಾರರ /ನೇಕಾರರನ್ನು ಸಂಘಟಿಸಿ ಅವರ ಉತ್ಪಾದಕತೆಯನ್ನು ಹೆಚ್ಚಿಸುವುದಲ್ಲದೇ ಅವರು ಬೆಳೆದಂತಹ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ 750 ಅಮೃತ ರೈತ/ಮೀನುಗಾರರ/ನೇಕಾರರ ಉತ್ಪಾದಕರ ಸಂಸ್ಥೆಗಳನ್ನು ರಚಿಸುವುದಾಗಿ ಮಾನ್ಯ ಮುಖ್ಯ ಮಂತ್ರಿಯವರು ಘೋಷಿಸಿರುತ್ತಾರೆ. ಈ ಉತ್ಪಾದಕರ ಸಂಸ್ಥೆಗಳ ಮೂಲಕ ಗುಣಮಟ್ಟದ ಪರಿಕರಗಳು, ಯಂತ್ರೋಪಕರಣಗಳು, ಮೂಲಭೂತ ಸೌಕರ್ಯಗಳನ್ನು ಸ್ಥಾಪಿಸುವುದರ ಮೂಲಕ ಉತ್ಪಾದನೆಗೆ ಸೂಕ್ತ ಬೆಲೆ ದೊರಕಿಸಿ ರೈತರ/ಮೀನುಗಾರರ/ನೇಕಾರರ ಆದಾಯ ಹೆಚ್ಚಿಸಬಹುದಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು 75ನೇ ಸ್ವಾತಂತ್ರ್ಯ ದಿನಾಚರಣೆಯ ಭಾಷಣದಲ್ಲಿ ಘೋಷಣೆ ಮಾಡಿರುವ ಕಾರ್ಯಕ್ರಮಗಳನ್ನು ಕೂಡಲೇ ಅನುಷ್ಠಾನಗೊಳಿಸಲು ಅಗತ್ಯ ಕ್ರಮವಹಿಸುವಂತೆ ಹಾಗೂ ಈ ಸಂಬಂಧ ಅಗತ್ಯ ಸರ್ಕಾರಿ ಆದೇಶಗಳನ್ನು ಕೂಡಲೇ ಹೊರಡಿಸಲು ಮುಖ್ಯ ಕಾರ್ಯದರ್ಶಿಯವರು ಸೂಚಿಸಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ AGD/92/AMS/2018, ದಿನಾಂಕ: 17-01-2019 ರನ್ವಯ ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ -2018 ಅನ್ನು ಜಾರಿಗೆ ತಂದಿದೆ. ರಾಜ್ಯದಲ್ಲಿನ ಎಲ್ಲಾ ಇಲಾಖೆಗಳು ಮತ್ತು ಅಭಿವೃದ್ಧಿ ಸಂಸ್ಥೆಗಳು ರೈತ ಉತ್ಪಾದಕರ ಸಂಸ್ಥೆಗಳ ರಚನೆಯನ್ನು ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ-2018 ರನ್ವಯ ರಚಿಸುತ್ತಿವೆ. ಕೇಂದ್ರ ಸರ್ಕಾರವು ಸಹ ರೈತ ಉತ್ಪಾದಕ ಸಂಸ್ಥೆಗಳನ್ನು ಉತ್ತೇಜಿಸಲು 10,000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನಕ್ಕೆ ಹೊಸ ಯೋಜನೆಯನ್ನು ಜಾರಿಗೆ ತಂದಿರುತ್ತದೆ.

23/9/21

ಉತ್ಪಾದಕರ ಸಂಸ್ಥೆಗಳ ರಚನೆಯು ರೈತರು/ಉತ್ಪಾದಕರ ಸಾಮೂಹಿಕೀಕರಣಕ್ಕೆ ಕಾರಣವಾಗುತ್ತದೆ ಮತ್ತು ಅವರ ಸಂಧಾನ ಶಕ್ತಿಯನ್ನು ಬಲಪಡಿಸುತ್ತದೆ. ಉತ್ಪಾದಕ ಸಂಸ್ಥೆಗಳು ತಮ್ಮ ಸದಸ್ಯರಿಗೆ ಅಗತ್ಯವಿರುವ ಗುಣಮಟ್ಟದ ಪರಿಕರಗಳನ್ನು ಖರೀದಿಸುವುದು ಮತ್ತು ಅವರು ಉತ್ಪಾದಿಸಿದ ಉತ್ಪನ್ನಗಳನ್ನು ತನ್ನ ಸದಸ್ಯರಿಂದ ಖರೀದಿಸಿ ಮಧ್ಯವರ್ತಿಗಳನ್ನು ತಪ್ಪಿಸಿ ನೇರವಾಗಿ ಮಾರಾಟ ಮಾಡುವ ಮೂಲಕ ಹೆಚ್ಚಿನ ದರ ಪಡೆಯಬಹುದಾಗಿದ್ದು, ಅದರನ್ವಯ ತೀರ್ಮಾನಿಸಿ, ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: AGRI-AML-147/2021,</u>**

**<u>ಬೆಂಗಳೂರು, ದಿನಾಂಕ: 23-08-2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸನ್ಮಾನ್ಯ ಮುಖ್ಯ ಮಂತ್ರಿಯವರು ದಿನಾಂಕ: 15ನೇ ಆಗಸ್ಟ್ 2021 ರ, 75ನೇ ಸ್ವಾತಂತ್ರ್ಯ ದಿನಾಚರಣೆಯ ಭಾಷಣದ ಘೋಷಣೆಯಂತೆ "ರೈತ, ನೇಕಾರ ಮತ್ತು ಮೀನುಗಾರರ ಉತ್ಪನ್ನಗಳ ಉತ್ಪಾದನೆ ಹಾಗೂ ಮಾರಾಟಕ್ಕೆ750 ಅಮೃತ ರೈತ/ಮೀನುಗಾರರ/ನೇಕಾರರ ಉತ್ಪಾದಕರ ಸಂಸ್ಥೆಗಳನ್ನು ಮೂರು ವರ್ಷಗಳ ಅವಧಿಯಲ್ಲಿ ಅಂದಾಜು ರೂ.225 ಕೋಟಿಗಳ ವೆಚ್ಚದಲ್ಲಿ ಸ್ಥಾಪಿಸಲು" ಅನುಮೋದನೆ ನೀಡಿ ಆದೇಶಿಸಿದೆ.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯ ಸಮಿತಿಯು ಇಲಾಖಾವಾರು ಅಮೃತ ರೈತ ಉತ್ಪಾದಕ ಸಂಸ್ಥೆಗಳ ಗುರಿಗಳನ್ನು ಹಾಗೂ ರೂಪುರೇಷೆಗಳನ್ನು ನಿರ್ಣಯಿಸುವ ಷರತ್ತುಗಳಿಗೊಳಪಟ್ಟು ಆದೇಶ ಹೊರಡಿಸಿದೆ.

ಈ ಆದೇಶವನ್ನು ಸಚಿವ ಸಂಪುಟದ ಸಭೆ ಸಂಖ್ಯೆ: ಪ್ರಕರಣ ಸಂಖ್ಯೆ: 337/2021, ದಿನಾಂಕ:19-08-2021ರನ್ವಯ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 296 Exp-4/2021, ದಿನಾಂಕ:18-08-2021ರಲ್ಲಿನ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

23/8/2021
(ಕೆ.ಬಿ. ಪ್ರಕಾಶ್)
ಸರ್ಕಾರದ ಉಪ ಕಾರ್ಯದರ್ಶಿ,
ಕೃಷಿ ಇಲಾಖೆ.

23/8/21

ಇವರಿಗೆ-

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.